ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದ ವಿವಿಧ ಸರ್ಕಾರಿ ಹಾಗೂ ಖಾಸಗಿ ಕಾಲೇಜುಗಳಲ್ಲಿ ಎಷ್ಟು ಮಂದಿ ಅರೆಕಾಲಿಕ ಉಪನ್ಯಾಸಕರು ಕೆಲಸ ನಿರ್ವಹಿಸುತ್ತಿದ್ದಾರೆ?

ಆ) ಇವರುಗಳನ್ನು ಖಾಯಂಗೊಳಿಸಲಾಗುವುದೇ?

ಇ) ಪ್ರಸಕ್ತ ಶೈಕ್ಷಣಿಕ ವರ್ಷಕ್ಕೆ ಸರ್ಕಾರಿ ಮತ್ತು ಅನುದಾನಿತ ಕಾಲೇಜುಗಳಲ್ಲಿ ಅರೆಕಾಲಿಕ ಉಪನ್ಯಾಸಕರ ನೇಮಕ ಮಾಡಿಕೊಳ್ಳಬಾರದೆಂದು ಸರ್ಕಾರದವರು ಆಜ್ಞೆ ಹೊರಡಿಸಿರುವರೇ?

ಈ) ಹಾಗಾದರೆ ಈಗಾಗಲೇ ಅರೆಕಾಲಿಕ ಉಪನ್ಯಾಸಕರಾಗಿ ಕೆಲಸ ನಿರ್ವಹಿಸುತ್ತಿರುವವರ ಬಗ್ಗೆ ಸರ್ಕಾರದ ನಿಲುವೇನು?

ಶ್ರೀ ಬಿ. ಸೋಮಶೇಖರ್ (ಉನ್ನತ ಶಿಕ್ಷಣ ಸಚಿವರು):-

ಅ) 1995-96ನೇ ಸಾಲಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಸುಮಾರು 2750 ಮಂದಿ ಮತ್ತು ಖಾಸಗಿ ಅನುದಾನಿತ ಕಾಲೇಜುಗಳಲ್ಲಿ ಸುಮಾರು 2335 ಮಂದಿ ಅರೆಕಾಲಿಕ ಉಪನ್ಯಾಸಕರು ಕರ್ತವ್ಯ ನಿರ್ವಹಿಸುತ್ತಿದ್ದರು.

ಆ) 1994-95ನೇ ಸಾಲಿನಲ್ಲಿ ಕರ್ತವ್ಯದಲ್ಲಿದ್ದು ದಿನಾಂಕ: 31-3-95ರಂದು ಕನಿಷ್ಟ ಪಕ್ಷ 02 (ಎರಡು) ವರ್ಷಗಳ ಸೇವೆಯನ್ನು ಸಲ್ಲಿಸಿದ್ದಲ್ಲಿ ಅಂತಹ ಅರೆಕಾಲಿಕ ಉಪನ್ಯಾಸಕರನ್ನು ಸೇವಾ ವಿಲೀನಗೊಳಿಸುವ ಬಗ್ಗೆ ಪರಿಶೀಲಿಸಲಾಗುತ್ತಿದೆ.

ಇ) ಹೌದು.

ಈ) ಮೇಲೆ (ಆ)ನಲ್ಲಿ ತಿಳಿಸಿರುವಂತೆ ದಿನಾಂಕ: 31-3-95ರಂದು 02 ವರ್ಷ ಸೇವೆ ಸಲ್ಲಿಸಿದ್ದು 1994-95ನೇ ಸಾಲಿನಲ್ಲಿ ಕರ್ತವ್ಯದಲ್ಲಿದ್ದ ಅರೆಕಾಲಿಕ ಉಪನ್ಯಾಸಕರು ಸೇವಾಸಕ್ರಮಕ್ಕಾಗಿ ಅರ್ಹರಿರುತ್ತಾರೆ.

ವಿಷಯ:- ಯಲ್ಲಾಪುರದ ಸರ್ಕಾರಿ ಕಾಲೇಜಿನ ಆಡಳಿತ ಲೋಪದೋಷಗಳು.

1347 (1175) **ಶ್ರೀ ವಿಶ್ವೇಶ್ವರ ಹೆಗಡೆ (ಅಂಕೋಲ):-** ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಯಲ್ಲಾಪುರದಲ್ಲಿನ ಸರ್ಕಾರಿ ಕಾಲೇಜಿನಲ್ಲಿರುವ ಸಿಬ್ಬಂದಿಗಳೇಷ್ಟು? (ವಿವರ ನೀಡುವುದು)

ಆ) ಯಲ್ಲಾಪುರ ಸರ್ಕಾರಿ ಕಾಲೇಜಿನಲ್ಲಿ ಪ್ರಿನ್ಸಿಪಾಲರು ಎಷ್ಟು ದಿವಸದಿಂದ ರಜೆ ಮೇಲಿದ್ದಾರೆ?

ಇ) ಯಲ್ಲಾಪುರ ಸರ್ಕಾರಿ ಕಾಲೇಜಿನಲ್ಲಿ ಆಡಳಿತ ಲೋಪದೋಷ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಇವರ ಬಗ್ಗೆ ಸರ್ಕಾರದ ಕ್ರಮಗಳೇನು?